ಬೇಲೂರು ಕ್ರೀಡಾಂಗಣ ಕಾಮಗಾರಿ

588 (690) ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು):– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೇಲೂರು ನಗರದಲ್ಲಿನ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ವತಿಯಿಂದ ಕ್ರೀಡಾಂಗಣ ಕಾಮಗಾರಿ ನಡೆಯುತ್ತಿರುವುದು ನಿಜವೇ ?

ಆ) ನಿಜವಾಗಿದ್ದಲ್ಲಿ, ಇದಕ್ಕೆ ಇದುವರೆವಿಗೂ ಖರ್ಚಾಗಿರುವ ಹಣವೆಷ್ಟು ?

ಇ) ಈ ಕಾಮಗಾರಿಯು ಈಗ ಯಾವ ಹಂತದಲ್ಲಿದೆ ? ಕಾಮಗಾರಿ ಪೂರ್ಣಗೊಳ್ಳದಿರಲು ಕಾರಣವೇನು ?

ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು):–

ಅ) ಹೌದು.

ಆ) ಬೇಲೂರು ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಒಟ್ಟು ರೂ. 104.30 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ. ಇದುವರೆಗೆ ರೂ. 70.21 ಲಕ್ಷ ವೆಚ್ಚವಾಗಿರುತ್ತದೆ.

ಇ) ಪೆವಿಲಿಯನ್ ಮತ್ತು ಟ್ರ್ಯಾಕ್ ಕಾಮಗಾರಿ ಮುಕ್ತಾಯವಾಗಿದೆ.

ಹೆಚ್ಚುವರಿ ಕಾಮಗಾರಿಗಳಾದ ಸಂಪರ್ಕ ರಸ್ತೆ, ಒಳಚರಂಡಿ, ತಂತಿ ಬೇಲಿ ಮತ್ತು ಕಟ್ಟಡಕ್ಕೆ ಬಣ್ಣ ಬಳಿಯುವುದು ಮಾತ್ರ ಬಾಕಿ ಇರುತ್ತದೆ.

ಒದಗಿಸಿರುವ ಹೆಚ್ಚುವರಿ ಅನುದಾನಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಸಿದ್ಧತೆಗಳ ಕಾರಣದಿಂದ ಕಾಮಗಾರಿ ವಿಳಂಬವಾಗಿದೆ. ತ್ವರಿತಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗಿದೆ.

ನಾಡ ಕಛೇರಿ ತೆರೆಯುವ ಕುರಿತು

589 (691) ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು):– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಅರಸೀಕೆರೆ ತಾಲ್ಲೂಕಿನ ಜಾವಗಲ್ ಹೋಬಳಿಯು ಹಾಸನ ಜಿಲ್ಲೆಯಲ್ಲಿಯೇ 3ನೇ ಅತಿ ದೊಡ್ಡ ಹೋಬಳಿಯಾಗಿರುವುದು ನಿಜವೇ ;

ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ನಾಡ ಕಛೇರಿ ತೆರೆಯದಿರಲು ಕಾರಣವೇನು;

ಇ) ಈ ಹೋಬಳಿಗೆ ನಾಡ ಕಛೇರಿ ತೆರೆಯಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ?

ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು):–

ಅ) ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಜಾವಗಲ್ ಹೋಬಳಿಯು, ತಾಲ್ಲೂಕಿನಲ್ಲಿ 4ನೇ ದೊಡ್ಡ ಹೋಬಳಿಯಾಗಿರುತ್ತದೆ.

ಆ) ನಾಡ ಕಛೇರಿಗಳನ್ನು ತೆರೆಯುವ ಕುರಿತು ಪರಿಶೀಲಿಸಲಾಗಿ ಶ್ರೀ ಎಂ.ಬಿ. ಪ್ರಕಾಶ್ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ತಾಲ್ಲೂಕು ಪುನರ್ ರಚನಾಸಮಿತಿಯು ವಿಸ್ತಾರವಾದ ಅಥವಾ ತಾಲ್ಲೂಕು ಕೇಂದ್ರದಿಂದ ಬಹುದೂರದಲ್ಲಿರುವ ಅಂದರೆ ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರಿನಂತಹ ಜಿಲ್ಲೆಗಳಲ್ಲಿ ಮಾತ್ರವೇ ಹೋಬಳಿಗಳಿಗೆ ಸೀಮಿತವಾದ ನಾಡಕಛೇರಿಗಳನ್ನು ಮುಂದುವರೆಸುವುದು ಎಂದು ಅಭಿಪ್ರಾಯ ಪಟ್ಟಿರುತ್ತಾರೆ. ಅಲ್ಲದೆ ಉಳಿದ ಜಿಲ್ಲೆಗಳಲ್ಲಿ 2 ಹೋಬಳಿಗಳಿಗೆ ವಿಸ್ತರಿಸಿ ನಾಡಕಛೇರಿಗಳನ್ನು ರಚಿಸಬೇಕೆಂದು ಶಿಫಾರಸ್ಸು ಮಾಡಿರುತ್ತಾರೆ. ಅದರನ್ವಯ ಜಾವಗಲ್ ಹೋಬಳಿಯು ತಾಲ್ಲೂಕಿನಲ್ಲಿ 4ನೇ ಅತಿದೊಡ್ಡ ಹೋಬಳಿಯಾಗಿದ್ದರೂ ತಾಲ್ಲೂಕು ಪುನರ್ ರಚನಾ ಸಮಿತಿಯು ಸಲ್ಲಿಸಿರುವ ವರದಿಯನ್ನು ಅನುಷ್ಠಾನಗೊಳಿಸಲು ಸಚಿವ ಸಂಪುಟದ ಉಪಸಮಿತಿಯು ರಚನೆಯಾದ ನಂತರ ಪ್ರಸ್ತಾವನೆಗಳನ್ನು ಪರಿಶೀಲಿಸಬೇಕಾಗುತ್ತದೆ. ಪ್ರಸ್ತುತ ಸಚಿವ ಸಂಪುಟದ ಉಪಸಮಿತಿಯು ರಚನೆಯಾಗದ ಹಿನ್ನೆಲೆಯಲ್ಲಿ ಪರಿಶೀಲನೆಯಲ್ಲಿದೆ.

ಇ) ವಿಷಯ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.

ವೈದ್ಯರ ಸಿಬ್ಬಂದಿಗಳ ತಂತ್ರಜ್ಞರ ಕೊರತೆ

590 (770) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ):– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಚಿಕ್ಕಬಳ್ಳಾಪುರ ಜಿಲ್ಲೆ, ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕಿನ ಪಟ್ಟಣದ 100 ಹಾಸಿಗೆ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿದ್ದು ಈಗಾಗಲೇ ಅದಕ್ಕೆ ಕಟ್ಟಡ